ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	456
ಸದಸ್ಯರ ಹೆಸರು	:	ಶ್ರೀ ಕೆ.ವಿ ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು	:	ಮಾನ್ಯ ಮುಖ್ಯಮಂತ್ರಿಗಳು
ಉತ್ತರಿಸಬೇಕಾದ ದಿನಾಂಕ	:	10.12.2020

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	2019-20ನೇ ಸಾಲಿನಲ್ಲಿ ಮೈಸೂರು ಜಿಲ್ಲೆಯಲ್ಲಿ ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಶಾಸಕರು ನೀಡಿರುವ ಕ್ರಿಯಾಯೋಜನೆ ಪಟ್ಟಿಯಲ್ಲಿರುವ ಎಲ್ಲಾ ಕಾಮಗಾರಿಗಳಿಗೆ ಸರ್ಕಾರ ಈಗಾಗಲೇ ಸೂಚಿಸಿರುವಂತೆ ಕಾರ್ಯಾದೇಶ ನೀಡಿ ಅನುದಾನ ಬಿಡುಗಡೆಗೊಳಿಸಲಾಗಿದೆಯೇ;	ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಶಾಸಕರು ನೀಡಿರುವ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ ಕಾರ್ಯಾದೇಶ ನೀಡುವ ಜವಾಬ್ದಾರಿ ಜಿಲ್ಲಾಧಿಕಾರಿಗಳಿಗೆ ಸಂಬಂಧಿಸಿರುತ್ತದೆ. ಅನುದಾನ ಬಿಡುಗಡೆಗೊಳಿಸುವ ಜವಾಬ್ದಾರಿ ರಾಜ್ಯ ಸರ್ಕಾರದಾಗಿದ್ದು, ಆರಂಭಿಕ ಶಿಲ್ಕು ಮತ್ತು ಬಿಡುಗಡೆಗೊಳಿಸಿದ ಅನುದಾನ ಸೇರಿ ಶೇಕಡ 75 ರಷ್ಟು ವೆಚ್ಚ ಭರಿಸಿದಾಗ ಆರ್ಥಿಕ ಇಲಾಖೆಯ ಸಹಮತಿಯಂತೆ ಅನುದಾನ ಬಿಡುಗಡೆಗೆ ಕ್ರಮ ವಹಿಸಲಾಗಿರುತ್ತದೆ. 2019-20ನೇ ಸಾಲಿನಲ್ಲಿ ಮೈಸೂರು ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿ ಫೆಬ್ರುವರಿ-2019ರ ಅಂತ್ಯಕ್ಕೆ ರೂ.42.07 ಕೋಟಿಗಳ ಅನುದಾನ ಲಭ್ಯವಿದ್ದ ಕಾರಣ ಮೂರು ಮತ್ತು ನಾಲ್ಕನೆಯ ಕಂತಿನ ಅನುದಾನ ಬಿಡುಗಡೆಯಾಗಿರುವುದಿಲ್ಲ. ಸದರಿ ಲಭ್ಯವಿರುವ ಅನುದಾನದಲ್ಲಿ ಶೇಕಡ 75 ರಷ್ಟು ವೆಚ್ಚ ಭರಿಸುವಂತೆ ನಾನು ದಿನಾಂಕ:04.02.2020ರಂದು ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ದಿನಾಂಕ:23.06.2020 ರಂದು ಪತ್ರದ ಮೂಲಕ ಸೂಚನೆ ನೀಡಲಾಗಿರುತ್ತದೆ.
ಆ)	ಮೈಸೂರು ಜಿಲ್ಲೆಯನ್ನು ನೋಡಲ್ ಜಿಲ್ಲೆಯಾಗಿ ಆಯ್ಕೆ ಮಾಡಿಕೊಂಡಿರುವ ಪ್ರತಿಯೊಬ್ಬ ಶಾಸಕರು 2019-20ನೇ ಸಾಳಿಗೆ ಎಷ್ಟು ಮೊತ್ತದ ಕಾಮಗಾರಿಗಳಿಗಾಗಿ ಪತ್ರ ನೀಡಿರುತ್ತಾರೆ; (ಪ್ರತಿಯೊಬ್ಬ ಶಾಸಕರ ಕ್ರಿಯಾ ಯೋಜನೆಯ ಮೊತ್ತ ಪ್ರತ್ಯೇಕವಾಗಿ ನೀಡುವುದು)	2019-20ನೇ ಸಾಲಿನಲ್ಲಿ ಪ್ರತಿ ಕ್ಷೇತ್ರಕ್ಕೆ ರೂ.2.00 ಕೋಟಿಗಳಂತೆ ಕ್ರಿಯಾ ಯೋಜನೆ ರೂಪಿಸಲು ದಿನಾಂಕ:09.12.2020 ರಂದು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. ಪ್ರಸ್ತುತ, ಮೈಸೂರು ಜಿಲ್ಲೆಯಲ್ಲಿ 11 ಮಾನ್ಯ ವಿಧಾನ ಸಭಾ ಸದಸ್ಯರುಗಳು ಹಾಗೂ 4 ವಿಧಾನ ಪರಿಷತ್ ಸದಸ್ಯರುಗಳಿದ್ದು, ಇವರುಗಳ ಪೈಕಿ ಚಾಮುಂಡೇಶ್ವರಿ ಮತ್ತು ಪಿರಿಯಾಪಟ್ಟಣ ವಿಧಾನ ಸಭಾ ಕ್ಷೇತ್ರದ ಶಾಸಕರುಗಳು ಮಾತ್ರ ರೂ.2.00 ಕೋಟಿಗಳಿಗೆ ಕ್ರಿಯಾ ಯೋಜನೆಯನ್ನು ಸಲ್ಲಿಸಿದ್ದು, ಇನ್ನುಳಿದ ಶಾಸಕರುಗಳು ಪೂರ್ಣ ಪ್ರಮಾಣದಲ್ಲಿ ಕ್ರಿಯಾ ಯೋಜನೆ ಸಲ್ಲಿಸಿರುವುದಿಲ್ಲ. ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.
ಇ)	2019-20ನೇ ಸಾಲಿನಲ್ಲಿ ಪ್ರತಿಯೊಬ್ಬ ಶಾಸಕರು ಸೂಚಿಸಿರುವ ಕಾಮಗಾರಿಗಳಿಗೆ ಇದುವರೆಗೆ ಎಷ್ಟು ಮೊತ್ತವನ್ನು ಬಿಡುಗಡೆ ಮಾಡಲಾಗಿದೆ? (ಪ್ರತಿಯೊಬ್ಬ ಶಾಸಕರಿಗೆ ಇದುವರೆಗೆ ನೀಡಿರುವ ಅನುದಾನದ ಮೊತ್ತವನ್ನು ಪ್ರತ್ಯೇಕವಾಗಿ ನೀಡುವುದು)	ಮೈಸೂರು ಜಿಲ್ಲೆಯ ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿ ರೂ.41.50 ಕೋಟಿಗಳ ಅನುದಾನವು ಪ್ರಸ್ತುತ ಲಭ್ಯವಿದ್ದು, ಪ್ರತಿ ಕ್ಷೇತ್ರಕ್ಕೆ ರೂ.2.00 ಕೋಟಿ ವೆಚ್ಚ ಭರಿಸಲು ಯಾವುದೇ ತೊಂದರೆ ಇರುವುದಿಲ್ಲ. ಲಭ್ಯವಿರುವ ಅನುದಾನದ ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.

ಸಂಖ್ಯೆ:ಪಿಡಿಎಸ್ 99 ಕೆಎಲ್ಎಸ್ 2020

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ

ಅನುಬಂಧ-1

ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ 2019-20ನೇ ಸಾಲಿನ ವರದಿ

ಕ್ರಮ ಸಂಖ್ಯೆ	ವಿಧಾನಸಭಾ/ವಿಧಾನ ಪರಿಷತ್ ಸದಸ್ಯರುಗಳು	ಒಟ್ಟು ಕಾಮಗಾರಿಗಳು	ಆಡಳಿತಾತ್ಮಕ ಅನುಮೋದನೆ ನೀಡಿರುವ ಕಾಮಗಾರಿಗಳು	ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ)	ವೆಚ್ಚ (ರೂ.ಲಕ್ಷಗಳಲ್ಲಿ)	ಬಾಕಿ ಇರುವ ಮೊತ್ತ (ರೂ.ಲಕ್ಷಗಳಲ್ಲಿ)
1	ಚಾಮರಾಜ	22	3	139.00	0.00	139.00
2	ಚಾಮುಂಡೇಶ್ವರಿ	25	9	200.25	4.88	195.38
3	ಹೆಗ್ಗಡದೇವನಕೋಟೆ	18	12	73.45	16.66	56.79
4	ಹುಣಸೂರು	22	2	85.12	3.00	82.12
5	ಕೃಷ್ಣರಾಜ	0	0	0.00	0.00	0.00
6	ಕೃಷ್ಣರಾಜನಗರ	33	5	100.50	14.39	86.11
7	ನಂಜನಗೂಡು	7	7	30.50	20.51	9.99
8	ನರಸಿಂಹರಾಜ	12	1	59.90	0.00	59.90
9	ಪಿರಿಯಪಟ್ಟಣ	48	10	204.50	29.25	175.25
10	ಟಿ.ನರಸೀಪುರ	1	1	49.76	0.00	49.76
11	ವರುಣ	20	5	64.00	7.13	56.88
1	ಶ್ರೀ ಆರ್.ಧರ್ಮಸೇನಾ	4	4	11.00	6.75	4.25
2	ಶ್ರೀ ಎಸ್.ನಾಗರಾಜು	14	14	49.00	26.53	22.47
3	ಶ್ರೀ ಕೆ.ಟಿ.ಶ್ರೀಕಂಠೇಗೌಡ	0	0	0.00	0.00	0.00
4	ಶ್ರೀ ಕೆ.ವಿ.ನಾರಾಯಣ ಸ್ವಾಮಿ	0	0	0.00	0.00	0.00
	ಒಟ್ಟು	**226**	**73**	**1066.98**	**129.10**	**937.90**